# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಸಕಾಅ/ಕೊಉವಿ/ಪಿಆರ್/03/2022-23

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 20.07.2022

**ದಿನಾಂಕ: 20.07.2022 ರಂದು ವಾರ್ಡ್ ಸಂಖ್ಯೆ 08 ರಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)
- ಶ್ರೀ ಕೆ.ಎನ್. ಬಾಬುರೆಡ್ಡಿ, ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ
- ಶ್ರೀ ವಿ. ಮಂಜುನಾಥ್,ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಜಿ. ವಿಶ್ವನಾಥ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಗೋವಿಂದರಾಜು.ಇ, ಸಹಾಯಕ ಅಭಿಯಂತರರು, ಬೆಸ್ಕಾಂ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ಭರತ್‌ರಾಜ್, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು
- ಶ್ರೀ ಅಂಜಿನಪ್ಪ, ಬಿಬಿ ನಗರ ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ.ಪ್ರವೀಣ್ಎ.ಆರ್.ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ

ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು ಮಾತನಾಡಿ ಸದರಿ ಬಡಾವಣೆಯ ಮನೆ ನಂ. 188 ರವರು ಪಾದಚಾರಿ ಮಾರ್ಗದಲ್ಲಿ ಗಿಡಗಳನ್ನು ಹಾಕಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಹಾಗೂ ಸಿ.ಕ್ಯೂ.ಎ.ಎಲ್ ಪಾರ್ಕ್‌ನಲ್ಲಿರುವ ಹಾಪ್‌ಕಾಮ್ಸ್ ರವರು ವ್ಯಾಪಾರದ ಸಾಮಗ್ರಿಗಳನ್ನು ಪಾದಚಾರಿ ಮಾರ್ಗದಲ್ಲಿ ಇಟ್ಟು ವ್ಯಾಪಾರ ನಡೆಸುತ್ತಿರುವುದಾಗಿ ಇದರಿಂದ ಸಾರ್ವಜನಿಕರಿಗೆ ನಡೆದಾಡಲು ತೊಂದರೆ ಉಂಟಾಗಿದ್ದು ಸಮಸ್ಯೆಯನ್ನು ಬಗೆಹರಿಸಿಕೊಡಲು ಸಭೆಗೆ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ಕಿರಿಯ ಅಭಿಯಂತರರಿಗೆ ಹಿರಿಯ ಆರೋಗ್ಯ ಪರೀವಿಕ್ಷಕರೊಂದಿಗೆ ಜಂಟಿ ತಪಾಸಣೆ ಮಾಡಿ ಸಮಸ್ಯೆಯನ್ನು ಬಗೆಹರಿಸಲು ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಹಾಗೂ ಸದರಿ ಬಡಾವಣೆಯ ಸರ್ವಿಸ್ ರಸ್ತೆಯಲ್ಲಿ ಇರುವ ಗ್ಯಾರೇಜ್‌ನವರು ರಸ್ತೆಯಲ್ಲಿಯೆ ವಾಹನಗಳನ್ನು ನಿಲ್ಲಿಸುತ್ತಿದ್ದಾರೆ, ವಾಹನಸವಾರರಿಗೆ ಎದುರು ಬರುವ ವಾಹನಗಳು ಕಾಣಿಸುತ್ತಿಲ್ಲ, ಇದರಿಂದ ರಸ್ತೆ ಅವಘಡ ಸಂಬವಿಸುವ ಅಪಾಯವಿದೆ ಎಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್ ಗೆ ಸ್ಥಳಾಂತರಿಸಲಾಗುವುದು ಹಾಗೂ ಸದರಿ ಕಾರ್ ಗ್ಯಾರೇಜ್ ರವರಿಗೆ ರಸ್ತೆಯಲ್ಲಿ ವಾಹನಗಳನ್ನು ನಿಲ್ಲಿಸದಂತೆ ನೋಟಿಸ್ ಜಾರಿ ಮಾಡುವಂತೆ ಹಿರಿಯ ಆರೋಗ್ಯ ಪರಿವಿಕ್ಷಕರಿಗೆ ತಿಳಿಸಿದರು.

ಶ್ರೀ ಭರತ್‌ರಾಜ್, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು ರವರು ಮಾತನಾಡಿ ಸದರಿ ಬಡಾವಣೆಯಲ್ಲಿ ಒಳಚರಂಡಿ ಸಮಸ್ಯೆ ಇದ್ದು ಚರಂಡಿಯ ನೀರು ರಸ್ತೆಯ ಮೇಲೆ ಹರಿಯುತ್ತಿರುವುದು ಕಂಡುಬಂದಿದೆ, ಇದರಿಂದ ಸಾರ್ವಜನಿಕರಿಗೆ ರೋಗ ಹರಡಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿ,

ಈ ಕುರಿತು ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬಿಡ್ಲ್ಯೂಎಸ್‌ಎಸ್‌ಬಿ) ಮಾತನಾಡಿ ಸದರಿ ಬಡಾವಣೆಯಲ್ಲಿ ಅಳವಡಿಸಿರುವ ಒಳಚರಂಡಿ ಪೈಪ್‌ಗಳು ಬಹಳ ಹಳೆಯದಾಗಿದ್ದು ಹೊಸ ಮಾರ್ಗಗಳನ್ನು ಅಳವಡಿಸಲು ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ತಿಳಿಸಿದರು. ವಾರ್ಡ್‌ನಲ್ಲಿ ಕೆಲವು ಪ್ರದೇಶಗಳಲ್ಲಿ ಮಳೆನೀರನ್ನು ಒಳಚರಂಡಿಯ ಒಳಗೆ ಬಿಡಲಾಗುತ್ತಿದೆ, ಇದರಿಂದ ಒಳಚರಂಡಿಯು ತುಂಬಿಹರಿಯುವುದ್ದಕ್ಕೆ ಪ್ರಮುಕ ಕಾರಣವಾಗುತ್ತಿದೆ ಎಂದು ಸದರಿ ಸದಸ್ಯರುಗಳಿಗೆ ಜಾಗೃತ ಮೂಡಿಸಲು ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯ ಅಂಗಾಲ ಪರಮೇಶ್ವರಿ ದೇವಸ್ಥಾನದಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಸಭೆಗೆ ಕೋರಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಶ್ರೀ ಪ್ರವೀಣ್ ಎ. ಆರ್, ಕಿರಿಯ ಅಭಿಯಂತರರಿಗೆ ಸ್ಥಳ ಪರಿಶೀಲನೆ ಮಾಡಿ ಸಮಸ್ಯೆಯನ್ನು ಬಗೆಹರಿಸಲು ತಿಳಿಸಿದರು.

ಶ್ರೀ ಕೆ.ಎನ್. ಬಾಬುರೆಡ್ಡಿ, ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ ರವರು ಮಾತನಾಡಿ ವಾರ್ಡ್‌ನಲ್ಲಿ ಬೀದಿ ದೀಪಗಳ ಸಮಸ್ಯೆ ಇದ್ದಲ್ಲಿ ಸದರಿ ಜಾಗದ ಲೊಕೆಷನ್ ನೀಡಿದಲ್ಲಿ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಪ್ರತಿಯನ್ನು:-

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿಸಲ್ಲಿಸಿದೆ.
5. ವಲಯ ಅರಣ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಗೆ ಹಾಜರಾಗಲು ತಿಳಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿರವರ ಮಾಹಿತಿಗಾಗಿ ಕಳುಹಿಸಿದೆ.
11. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
12. ಕಛೇರಿ ಕಡತಕ್ಕೆ.